<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 89/2014 ಸಿಡಬ್ಲೂ: 13 ಪಿಡಬ್ಲೂ: 12

ಪ್ರಮಾಣವಚನ ಬೋಧಿಸಲಾಯಿತು ದಿಃ 25-05-2026

ಹೆಸರು : ಪರಸಪ್ಪ

ತಂದೆ ಹೆಸರು : ಶವಪ್ಪ ವನಂಜಕರ್

ವಯಸ್ಸು : 44 ವರ್ಷ

ಉದ್ಯೋಗ : ಪಿ ಐ ಶಹಬಾದ್ ಟೌನ್

ವಾಸಸ್ಥಳ : ಶಹಬಾದ್

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ನಾನು 10-12-2012 ರಿಂದ 25-08-2014 ವರೆಗೆ ಸೇಡಂ ಪಿ ಎಸ್ ನಲ್ಲಿ ಪಿ ಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ23-03-2013 ರಂದು ಬೆಳಿಗ್ಗೆ 08-00 ಗಂಟೆಗೆ ಸುಮಾರಿಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಸರ್ಕಾರಿ ಆಸ್ಪತ್ರೆ ಸೇಡಂ ದಿಂದ ಎಂ ಎಲ್ ಸಿ ಬಂದ ಮೇರೆಗೆ ಆಸ್ಪತ್ರೆಗೆ ಭೇಟಿ ನೀಡಿ ಚಾ ಸಾ 1 ರವರ ಹೇಳಿಕೆ ದೂರನ್ನು ಪಡೆದುಕೊಂಡು ಮರಳಿ ಠಾಣೆಗೆ ಬಂದು, ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 63/2013 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-33 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-33(ಬಿ ಮತ್ತು ಸಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-40 ಎಂದು ಸಾಕ್ಷಿಯ ಸಹಿಯನ್ನು ನಿಪಿ-40(ಎ) ಎಂದು ಗುರುತಿಲಾಯಿತು.

ನಂತರ ಅದೇ ದಿನ ಗುನ್ನೆ ಸ್ಥಳಕ್ಕೆ ಭೇಟಿ ನೀಡಿ ಚಾ ಸಾ 2 ಮತ್ತು 3 ರವರನ್ನು ಬರ ಮಾಡಿಕೊಂಡು ಚಾ ಸಾ 1 ರವರು ತೋರಿಸಿದಂತೆ ಮಧ್ಯಾಹ್ನ 01-00 ರಿಂದ 02-00 ಗಂಟೆಯ ವರೆಗೆ ಘಟನಾ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸದರಿ ಪಂಚನಾಮೆಯಕಾಲಕ್ಕೆ ಒಂದು

ಚೂಪಾದ ಕಟ್ಟಿಗೆ ಮತ್ತು ಇನೊಂದು ಕಟ್ಟಿಗೆಯನ್ನು ಜಪ್ತಿ ಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ಈಗ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 35 ಎಂದು ಗುರುತಿಸಲಾಗಿದೆ ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 35(ಸಿ) ಎಂದು ಗುರುತಿಸಲಾಯಿತು. ಅದೇ ರೀತಿ 2 ಕಟ್ಟಿಗೆಗಳನ್ನು ನೋಡಿ ಗುರುತಿಸಿರುತ್ತಾರೆ ಅವುಗಳನ್ನು ಈಗಾಗಲೇ ಮು ಮಾ 1 ಮತ್ತು 2 ಎಂದು ಗುರುತಿಸಲಾಗಿದೆ. ಅದೇ ದಿನ ಚಾ ಸಾ 4 ರಿಂದ 10 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ದಿ.15-05-2013 ಚಾ ಸಾ 4 ರವರ ಎಕ್ಸ ರೇ ವರದಿಯನ್ನು ಚಾ ಸಾ 11 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡಿ ಗುರುತಿಸಿದ್ದು ಅದನ್ನು ನಿ ಪಿ 41 ಎಂದು ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 41(ಎ) ಎಂದು ಗುರುತಿಸಲಾಯಿತು. ನಂತರ ದಿ.01-06-2013 ರಂದು ಚಾ ಸಾ 1, 4 ರಿಂದ 6 ರವರ ಗಾಯದ ಪ್ರಮಾಣ ಪತ್ರವನ್ನು ಚಾ ಸಾ 12 ರವರಿಂದ ಪಡೆದುಕೊಂಡಿರುತ್ತೇನೆ. ಚಾ ಸಾ 1, 4 ರಿಂದ 6 ರವರ ಗಾಯದ ಪ್ರಮಾಣ ಪತ್ರಗಳನ್ನು ಈಗಾಗಲೇ ನಿ ಪಿ 36 ರಿಂದ 39 ಎಂದು ಗುರುತಿಸಲಾಗಿದೆ. ಹಾಗೂ ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ ಪಿ 36(ಬಿ) ದಿಂದ 39(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಅದೇ ದಿನ ಚಾ ಸಾ 7 ರವರ ಗಾಯದ ಪ್ರಮಾಣ ಪತ್ರವನ್ನು ಚಾ ಸಾ 11 ರವರಿಂದ ಪಡೆದುಕೊಂಡೆನು. ಸದರಿ ಪ್ರಮಾಣ ಪತ್ರವನ್ನು ಈಗ ನೋಡಿ ಗುರುತಿಸಿದ್ದು ಅದನ್ನು ನಿ ಪಿ 42 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 42(ಎ) ಎಂದು ಗುರುತಿಸಲಾಯಿತು. ನಂತರ ಸದರಿ ಪ್ರಕರಣದ ತನಿಖೆಯನ್ನು ಪೂರ್ಣ ಗೊಳಿಸಿ ಆರೋಪಿತರ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದಃ ಆರೋಪಿ ಪರ ವಕೀಲರು ಪಾಟಿ ಸವಾಲಿಗೆ ಕಾಲಾವಕಾಶ ಕೋರಿದ್ದು ಆದರೆ ಯಾವುದೇ ಸೂಕ್ತ ಕಾರಣ ನೀಡದೇ ಇರುವುದರಿಂದ ವಿನಂತಿಯನ್ನು ತಳ್ಳಿ ಹಾಕಿ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ . ದಂ. ಸೇಡಂ.**